511(820) ಶ್ರೀ ರೇಣುಕಾಚಾರ್ಯ ಎಂ ಪಿ (ಹೊನ್ನಾಳಿ) ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಹೊನ್ನಾಳಿ ತಾಲ್ಲೂಕಿನಲ್ಲಿ ರೈತ ಸಂಜೀವಿನಿ ವಿಮಾ ಯೋಜನೆಯಡಿ ಎಷ್ಟು ಜನ ರೈತರಿಗೆ ಈವರೆಗೂ ಹಣ ಬಿಡುಗಡೆ ಮಾಡಲಾಗಿದೆ (ಗ್ರಾಮವಾರು ಫಲಾನುಭವಿ ರೈತರ ಮಾಹಿತಿ ನೀಡುವುದು)

ಆ) ಹಣ ಬಿಡುಗಡೆ ಕೋರಿ ಸಲ್ಲಿಸಲ್ಪಟ್ಟ ಹಾಗೂ ಇನ್ನೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು?

ಇ) ಇವರಿಗೆ ಹಣ ಬಿಡುಗಡೆ ಯಾವಾಗ ಮಾಡಲಾಗುವುದು?

ಶ್ರೀ ಪ್ರಕಾಶ್ ಬಿ ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು)

ಅ) ಹೊನ್ನಾಳಿ ತಾಲ್ಲೂಕಿನಲ್ಲಿ ರೈತ ಸಂಜೀವಿನಿ ವಿಮಾ ಯೋಜನೆಯಡಿಯಲ್ಲಿ 9 ಜನ ರೈತರಿಗೆ ಒಟ್ಟು ರೂ 2,06,000-00 ಗಳನ್ನು ಬಿಡುಗಡೆ ಮಾಡಲಾಗಿದೆ (ಪಟ್ಟಿ ಲಗತ್ತಿಸಿದೆ)

ಆ) ಹಣ ಬಿಡುಗಡೆ ಕೋರಿ 2001-2002 ರಿಂದ ಈವರೆಗೂ 19 ಅರ್ಜಿಗಳು ಬಂದಿವೆ 3 ಅರ್ಜಿಗಳು ಮಾತ್ರ ಬಾಕಿ ಉಳಿದಿದ್ದು ಇವುಗಳಿಗೆ ಹೊನ್ನಾಳಿ ಮಾರುಕಟ್ಟೆ ಸಮಿತಿಯಿಂದ ಮಾಹಿತಿಯನ್ನು ಕೇಳಲಾಗಿದೆ

ಇ) ಇವರಿಗೆ ಹೊನ್ನಾಳಿ ಮಾರುಕಟ್ಟೆ ಸಮಿತಿಯಿಂದ ಕೋರಿದ ಮಾಹಿತಿ ಬಂದ ಕೂಡಲೇ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

512(202) ಶ್ರೀ ಶಕುಂತಲಾ ಟಿ ಶೆಟ್ಟಿ (ಪುತ್ತೂರು) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿ ಶಿಕ್ಷಣ ನೀಡುತ್ತಿರುವ ಬಿ ಎಡ್ , ಬಿ ಪಿ ಎಡ್ , ಟಿಸಿಹೆಚ್ ಕಾಲೇಜುಗಳ ಸಂಖ್ಯೆ ಎಷ್ಟು, ಅವುಗಳಲ್ಲಿ ಎಷ್ಟು ಜನ ಅಭ್ಯರ್ಥಿಗಳಿಗೆ ಪ್ರವೇಶಾವಕಾಶ ಲಭ್ಯವಿದೆ

ಆ) ಅವುಗಳಲ್ಲಿ ಖಾಸಗೀ ಅನುದಾನಿತ ಹಾಗೂ ಸರ್ಕಾರಿ ಕಾಲೇಜುಗಳೆಷ್ಟು,

ಇ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಇಂತಹ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ

ಈ) ಈ ಕಾಲೇಜುಗಳು ವಿದ್ಯಾರ್ಥಿಗಳ ಬೇಡಿಕೆಯ ಅನುಗುಣವಾಗಿದೆಯೇ, ಅಥವಾ ಸಂಖ್ಯೆಯಲ್ಲಿ ಹೆಚ್ಚಾಗಿವೆಯೇ?

ಶ್ರೀ ಡಿ ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) ಅನುಬಂಧ-1ರಲ್ಲಿ ನೀಡಲಾಗಿದೆ

ಆ) ಅನುಬಂಧ-2ರಲ್ಲಿ ನೀಡಲಾಗಿದೆ

ಇ) ಕಳೆದ ಎರಡು ವರ್ಷಗಳಲ್ಲಿ ಎನ್‌ಸಿಟಿಇ-ಎಸ್‌ಆರ್‌ಸಿ ಅಂತಹ ಯಾವುದೇ ಸಂಸ್ಥೆಗಳಿಗೆ ಮಾನ್ಯತೆ ನೀಡಿಲ್ಲ

ಈ) ಉದ್ಭವಿಸುವುದಿಲ್ಲ

ಅನುಬಂಧ-1

| ಕಾಲೇಜು | ಕಾಲೇಜುಗಳ ಸಂಖ್ಯೆ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ ಎಡ್ | 68 | 6,800 |
| ಬಿ.ಪಿ.ಎಡ್ | 12 | 510 |
| ಡಿ.ಎಡ್ (ಟಿ.ಸಿ.ಹೆಚ್) | 131 | 7,800 |

ಅನುಬಂಧ–2

| ಕಾಲೇಜು | ಸರ್ಕಾರಿ | ಅನುದಾನಿತ | ಖಾಸಗಿ |
|---|---|---|---|
| ಬಿ ಎಡ್ | 6 | 22 | 40 |
| ಬಿ.ಪಿ ಎಡ್ | 3 | – | 9 |
| | (ವಿಶ್ವವಿದ್ಯಾಲಯ) | | |
| ಡಿ ಎಡ್ (ಟಿ.ಸಿ ಹೆಚ್) | 37 | 40 | 54 |

513(204) ಶ್ರೀಮತಿ ಶಕುಂತಲಾ ಟಿ ಶೆಟ್ಟಿ (ಪುತ್ತೂರು) ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬಿಳಿ ಗೋಟು ಅಡಿಕೆಯ ಬೆಲೆಯು ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಬಿಳಿಗೋಟು ಅಡಿಕೆಗೆ ಬೆಂಬಲ ಬೆಲೆಯನ್ನು ಘೋಷಿಸಿ ಖರೀದಿಸುವ ಉದ್ದೇಶ ಸರ್ಕಾರಕ್ಕೆ ಇದೆಯೆ?

ಇ) ಇದ್ದಲ್ಲಿ ಯಾವ ದರದಲ್ಲಿ ಬೆಂಬಲ ಬೆಲೆ ನೀಡಲಾಗುವುದು? ದರ ನಿರ್ಣಯಕ್ಕೆ ಆಧಾರ ಯಾವುದು?

ಈ) ಅಡಿಕೆಯನ್ನು ಎಂದಿನಂತೆ ಎಲ್ಲಿಯವರೆಗೆ ಖರೀದಿಸಲಾಗುವುದು? ಈ ಬಗ್ಗೆ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ?

ಶ್ರೀ ಪ್ರಕಾಶ್ ಬಿ ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು)

ಅ) ಬಂದಿದೆ

ಆ) ಈ ಸಂಬಂಧವಾಗಿ ದಿನಾಂಕ 28 06 2004 ರಂದು ಮಾನ್ಯ ಕೃಷಿ ಸಚಿವರು ಅಧ್ಯಕ್ಷತೆಯಲ್ಲಿ ಅಡಿಕೆ ಬೆಳೆಗಾರರ ಮತ್ತು ಅಡಿಕೆ ವ್ಯಾಪಾರದಲ್ಲಿ ತೊಡಗಿರುವ ಸಹಕಾರಿ ಸಂಸ್ಥೆಗಳೊಂದಿಗೆ ಸಭೆ ಜರುಗಿದ್ದು, ಈ ಕುರಿತು ಪರಿಶೀಲಿಸಲಾಗುತ್ತಿದೆ

ಇ) 2002–03ರ ವರ್ಷದಲ್ಲಿ ಭಾರತ ಸರ್ಕಾರವು ಚಾಲಿ ಅಡಿಕೆಗೆ ಪ್ರತಿ ಕ್ವಿಂಟಾಲ್‌ಗೆ ರೂ 6,000–00ಗಳ ಕನಿಷ್ಟ ಬೆಂಬಲ ಬೆಲೆಯನ್ನು ನಿಗಧಿಪಡಿಸಿತ್ತು

ಅಡಿಕೆ ಸಾಗುವಳಿ ವೆಚ್ಚವನ್ನು ಪರಿಗಣಿಸಿ ಕೇಂದ್ರ ಸರ್ಕಾರದ ಕೃಷಿ ವೆಚ್ಚ ಮತ್ತು ಬೆಲೆ ಆಯೋಗದ ಶಿಫಾರಸ್ಸಿನ ಅನ್ವಯ ಭಾರತ ಸರ್ಕಾರವು ಅಡಿಕೆಗೆ ಬೆಂಬಲ ಬೆಲೆಯನ್ನು ನಿರ್ದರಿಸುತ್ತದೆ

ಈ) ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುತ್ತಿದ್ದು, ಖರೀದಿಯ ದಿನಾಂಕವನ್ನು ನಿಗಧಿಪಡಿಸಿರುವುದಿಲ್ಲ

514(488) ಶ್ರೀ ಶಂಕರಲಿಂಗೇಗೌಡ ಹೆಚ್ ಎಸ್ (ಚಾಮರಾಜ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿನ ವಿಶ್ವವಿದ್ಯಾಲಯಗಳು ಯಾವವು, ಹಾಗೂ ಅವುಗಳನ್ನು ಯಾವಾಗ ಪ್ರಾರಂಭಿಸಲಾಯಿತು,

ಆ) ಈ ವಿಶ್ವವಿದ್ಯಾಲಯಗಳಲ್ಲಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕ ಮತ್ತು ಅಧ್ಯಾಪಕೇತರ ನೌಕರರು ಎಷ್ಟು

ಇ) ಅವರುಗಳು ಎಷ್ಟೆಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ,